# April 5, 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಮೊದಲ ಹಂತದ, ರಾಜ್ಯದ 14 ಲೋಕಸಭಾ ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆ ಅವಧಿ ಮುಕ್ತಾಯ: ವಿವಿಧ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ.

- ರಾಜ್ಯದಲ್ಲಿ ಮುಂದುವರಿದ ಮತದಾನ ಜಾಗೃತಿ: ಜಿಲ್ಲಾ ಸ್ವೀಪ್ ಸಮಿತಿಗಳಿಂದ ವೈವಿಧ್ಯಮಯ ಕಾರ್ಯಕ್ರಮಗಳು.

- ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ: ಅಗತ್ಯ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ.

- ರಾಜ್ಯದಲ್ಲಿ ಹೆಚ್ಚುತ್ತಿರುವ ಬಿಸಿಲ ತಾಪ: ಮುನ್ನೆಚ್ಚರಿಕೆವಹಿಸಲು ಸಾರ್ವಜನಿಕರಿಗೆ ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ.

ಈಗ ವಾರ್ತೆಗಳ ವಿವರ

*******

ರಾಜ್ಯದಲ್ಲಿ ಇದೇ 26 ರಂದು ನಡೆಯಲಿರುವ ಮೊದಲ ಹಂತದ 14 ಲೋಕಸಭಾ ಕ್ಷೇತ್ರಗಳಿಗೆ ಉಮೇದುವಾರಿಕೆ ಸಲ್ಲಿಕೆ ಪ್ರಕ್ರಿಯೆ ನಿನ್ನೆ ಅಂತ್ಯಗೊಂಡಿದೆ. ಇಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, ಇದೇ 8 ರಂದು ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದೆ.

ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾದ ನಿನ್ನೆ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಜೆಡಿಎಸ್ ಹಿರಿಯ ನಾಯಕ ಎಚ್.ಡಿ. ಕುಮಾರಸ್ವಾಮಿ, ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಡಾ.ಸಿ.ಎನ್.ಮಂಜುನಾಥ್ ನಾಮಪತ್ರ ಸಲ್ಲಿಸಿದರು.

ಚಿಕ್ಕಬಳ್ಳಾಪುರದಿಂದ ಬಿಜೆಪಿ ಅಭ್ಯರ್ಥಿಯಾಗಿ ಡಾ.ಕೆ.ಸುಧಾಕರ್, ಬೆಂಗಳೂರು ದಕ್ಷಿಣ ಕ್ಷೇತ್ರದಿಂದ ತೇಜಸ್ವಿ ಸೂರ್ಯ, ಚಿತ್ರದುರ್ಗದಿಂದ ಗೋವಿಂದ ಕಾರಜೋಳ, ಹಾಸನ ಲೋಕಸಭಾ ಕ್ಷೇತ್ರದಿಂದ ಜೆಡಿಎಸ್‌ನ ಪ್ರಜ್ವಲ್ ರೇವಣ್ಣ, ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿ ಕ್ಯಾಪ್ಟನ್ ಬ್ರಿಜೇಶ್ ಚೌಟಾ, ಕೋಲಾರ ಲೋಕಸಭಾ ಕ್ಷೇತ್ರದಿಂದ ಜೆಡಿಎಸ್ ಅಭ್ಯರ್ಥಿಯಾಗಿ ಮಲ್ಲೇಶ್ ಬಾಬು ಉಮೇದುವಾರಿಕೆ ಸಲ್ಲಿಸಿದರು.

*******

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯ ಮತದಾನ ಹಾಗೂ ಮತದಾನ ಪ್ರಮಾಣ ಹೆಚ್ಚಳ ಮಾಡುವ ಉದ್ದೇಶದಿಂದ ಜಿಲ್ಲಾ ಸ್ವೀಪ್ ಸಮಿತಿಗಳು ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಮುಂದುವರಿಸಿವೆ.

ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ಬೆಣಚಮಟ್ಟಿ ಗ್ರಾಮದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ಸಿ.ಬಿ.ದೇವರಮನಿ, ಅರ್ಹ ಮತದಾರರು ಮತ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಬೇಕು. ಮೇ 7 ರಂದು ಜರುಗುವ ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯವಾಗಿ ಮತಗಟ್ಟೆ ಕೇಂದ್ರಕ್ಕೆ ಹೋಗಿ ಮತ ಚಲಾಯಿಸಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು.

ಮತದಾನ ಜಾಗೃತಿ ಕಾರ್ಯಕ್ರಮದ ಅಂಗವಾಗಿ ದಾವಣಗೆರೆ ರೈಲು ನಿಲ್ದಾಣದಲ್ಲಿ ನಿನ್ನೆ ಶಾಲಾ–ಕಾಲೇಜು ವಿದ್ಯಾರ್ಥಿನಿಯರಿಗೆ ರಂಗೋಲಿ ಬಿಡಿಸುವ ಸ್ಪರ್ಧೆ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಇಟ್ನಾಳ್, ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ ಶೇಕಡಾ 85 ಕ್ಕಿಂತ ಅಧಿಕ ಮತದಾನದ ಗುರಿ ಹೊಂದಲಾಗಿದ್ದು, ಈ ನಿಟ್ಟಿನಲ್ಲಿ ಎಲ್ಲ ಅಧಿಕಾರಿ ವರ್ಗ, ಸಾರ್ವಜನಿಕರನ್ನು ಒಳಗೊಂಡು ಮತದಾನ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕು ಪಂಚಾಯತಿಯಲ್ಲಿ ತಾಲೂಕು ಸ್ವೀಪ್ ಸಮಿತಿಯಿಂದ ಜಾಥಾ ಮತ್ತು ಮಾನವ ಸರಪಳಿ ನಿರ್ಮಿಸುವ ಮೂಲಕ ಮತದಾನ ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮದಲ್ಲಿ ಲೈಂಗಿಕ ಕಾರ್ಯಕರ್ತೆಯರು ಮತ್ತು ಮಂಗಳಮುಖಿಯರು ಪಾಲ್ಗೊಂಡು ಮತದಾನ ಕುರಿತು ಜಾಗೃತಿ ಮೂಡಿಸಿದರು.

ಲೋಕಸಭಾ ಚುನಾವಣೆ ಹಿನ್ನೆಲೆ, ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಕಾರ್ಯಕ್ರಮ ನಡೆಯುತ್ತಿದ್ದು, ನಿನ್ನೆ ಉಳ್ಳಾಲ ತಾಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಮತದಾನ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು. ಉಳ್ಳಾಲ ತಾಲೂಕು ಪಂಚಾಯತ್ ಬಳಿಯಿಂದ ನಾಟೆಕಲ್ ವರೆಗೆ ನಡೆದ ಜಾಥಾದಲ್ಲಿ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

*******

ಲೋಕಸಭಾ ಚುನಾವಣೆ ಮಾದರಿ ನೀತಿ ಸಂಹಿತೆ ಉಲ್ಲಂಘನೆಗೆ ಸಂಬಂಧಿಸಿದಂತೆ ದೂರುಗಳನ್ನು ದಾಖಲಿಸಲು ಸಾರ್ವಜನಿಕರು ಕೇಂದ್ರ ಚುನಾವಣಾ ಆಯೋಗದ ಸಿ–ವಿಜಿಲ್ ಸಿಟಿಜನ್ ಆಪ್ ಬಳಕೆ ಮಾಡಬಹುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ತಿಳಿಸಿದ್ದಾರೆ.

ಫೋನ್‌ನಲ್ಲಿ ಸೆರೆಹಿಡಿಯಲಾದ ವಿಡಿಯೋ ಅಥವಾ ಫೋಟೋ ರೂಪದ ದಾಖಲೆಗಳ ಮೂಲಕ ಸುಲಭವಾಗಿ ದೂರು ಸಲ್ಲಿಸಬಹುದಾಗಿದೆ. ಈ ಆಪ್ ಜಿಪಿಎಸ್ ಆಧಾರಿತವಾಗಿ ಕೆಲಸ ಮಾಡಲಿದ್ದು, ದೂರು ಸಲ್ಲಿಸುವ ವಿಳಾಸ ಚುನಾವಣಾ ಆಯೋಗಕ್ಕೆ ಹಾಗೂ ಸಂಬಂಧಿಸಿದ ಪೊಲೀಸರಿಗೆ ತಿಳಿಯುತ್ತದೆ. ಇದರಿಂದ ಆರೋಪಿತರನ್ನು ಸುಲಭವಾಗಿ ಪತ್ತೆಮಾಡಲು ಸಹಕಾರಿಯಾಗಲಿದೆ. ಸಿ–ವಿಜಿಲ್ ಸಿಟಿಜನ್ ಆಪ್ ಮೂಲಕ ದಾಖಲಿಸುವ ದೂರುದಾರರ ಮಾಹಿತಿಯನ್ನು ಗೌಪ್ಯವಾಗಿಡಲಾಗುವುದು ಎಂದು ಅವರು ತಿಳಿಸಿದ್ದಾರೆ.

*******

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ರಾಜಕೀಯ ಪಕ್ಷ, ಅಭ್ಯರ್ಥಿಗಳು ವಿದ್ಯುನ್ಮಾನ ಮಾಧ್ಯಮ, ಡಿಜಿಟಲ್ ಮಾಧ್ಯಮಗಳಲ್ಲಿ ಜಾಹಿರಾತು ನೀಡಲು ಕಡ್ಡಾಯವಾಗಿ ಜಿಲ್ಲಾ ಎಂಸಿಎಂಸಿ ಸಮಿತಿ ಅನುಮೋದನೆ ಪಡೆಯಬೇಕು ಎಂದು ಹಾವೇರಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರಘುನಂದನ ಮೂರ್ತಿ ತಿಳಿಸಿದ್ದಾರೆ.

ಜಾಹಿರಾತುಗಳಿಗೆ ಪ್ರಸಾರ ಪೂರ್ವದಲ್ಲಿ ದೃಢೀಕರಣ ನೀಡುವುದು, 'ಹಣಕ್ಕಾಗಿ ಸುದ್ದಿ' ಮೇಲ್ವಿಚಾರಣೆ ಹಾಗೂ ಪ್ರಸಾರ ತಡೆಯಲು ಕ್ರಮಗಳನ್ನು ಜರುಗಿಸುವುದು. ಸುಳ್ಳು ಸುದ್ದಿ, ದ್ವೇಷ ಭಾಷಣದ ಮೇಲೆ ನಿಗಾವಹಿಸಿ ವರದಿ ಸಂಗ್ರಹಿಸುವುದು ಸೇರಿದಂತೆ ಪೋಸ್ಟ್‌ಗಳ ಮೇಲ್ವಿಚಾರಣೆ ಮೇಲೆ ಎಂಸಿಎಂಸಿ ಸಮಿತಿ ನಿಗಾವಹಿಸಲಿದೆ ಎಂದು ಅವರು ತಿಳಿಸಿದ್ದಾರೆ.

*******

ಲೋಕಸಭೆ ಚುನಾವಣೆ ಕರ್ತವ್ಯಕ್ಕೆ ನಿಯೋಜನೆಗೊಂಡ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿ ತಮ್ಮ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ವಿಜಯಪುರ ಜಿಲ್ಲಾಧಿಕಾರಿ ಹಾಗೂ ಚುನಾವಣಾ ಅಧಿಕಾರಿಯೂ ಆಗಿರುವ ಟಿ.ಭೂಬಾಲನ್ ಸೂಚಿಸಿದ್ದಾರೆ.

ವಿಜಯಪುರದಲ್ಲಿ ಆಯೋಜಿಸಿದ್ದ ಸೆಕ್ಟರ್ ಅಧಿಕಾರಿಗಳ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಜಿಲ್ಲೆಯಲ್ಲಿ ಒಟ್ಟು **2085** ಮತಗಟ್ಟೆಗಳಿವೆ. ಈ ಎಲ್ಲ ಮತಗಟ್ಟೆ ಕಾರ್ಯಗಳಿಗೆ ನಿಯೋಜನೆಗೊಂಡಿರುವ ಪಿಆರ್‌ಒಗಳು, ಪೋಲಿಂಗ್ ಅಧಿಕಾರಿಗಳು, ಯಾವುದೇ ಲೋಪವಾಗದಂತೆ ಭಾರತೀಯ ಚುನಾವಣಾ ಆಯೋಗದ ನಿರ್ದೇಶನದ ಅನುಸಾರ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

*******

ಸರ್ಕಾರಿ ಅಧಿಕಾರಿ ವರ್ಗದಲ್ಲಿನ ಅರ್ಹ ಮತದಾರರು ಅಂಚೆ ಬ್ಯಾಲೆಟ್ ಮೂಲಕ ಮತದಾನ ಮಾಡಬಹುದು ಎಂದು ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ.

ಸರ್ಕಾರಿ ನೌಕರರು ಅಂಚೆ ಬ್ಯಾಲೆಟ್ ಮೂಲಕ ಮತ ಚಲಾಯಿಸಲು ಸಾಧ್ಯವಿಲ್ಲ ಎಂದು ಇತ್ತೀಚೆಗೆ ವಾಟ್ಸ್ ಆ್ಯಪ್ ಮೂಲಕ ತಪ್ಪು ಮಾಹಿತಿ ಹರಡುತ್ತಿದ್ದು, ಇದು ಸತ್ಯಕ್ಕೆ ದೂರ ಎಂದು ಆಯೋಗ ತಿಳಿಸಿದೆ.

ಚುನಾವಣಾ ಕರ್ತವ್ಯದಲ್ಲಿರುವ ಸರ್ಕಾರಿ ನೌಕರರು ನಿರ್ದಿಷ್ಟ ಮತದಾರ ಸೌಲಭ್ಯ ಕೇಂದ್ರಗಳ ಮೂಲಕ ಅಂಚೆ ಮತದಾನ ಮಾಡಬಹುದು ಎಂದು ಆಯೋಗ ತಿಳಿಸಿದೆ.

*******

ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ತಳಮಟ್ಟದಲ್ಲಿಯೇ ಒಗ್ಗಟ್ಟಿನಿಂದ ಕೆಲಸ ಮಾಡಿ ಮೈತ್ರಿ ಅಭ್ಯರ್ಥಿಗಳನ್ನು ಗೆಲ್ಲಿಸಲಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಹಾಸನ ಸೇರಿದಂತೆ ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್ ಅಭ್ಯರ್ಥಿಗಳು ದೊಡ್ಡ ಮಟ್ಟದಲ್ಲಿ ಗೆಲುವು ಸಾಧಿಸಲಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಉಂಟಾಗುವ ಸಣ್ಣಪುಟ್ಟ ಗೊಂದಲಗಳನ್ನು ಮಾತುಕತೆ ಮೂಲಕ ಬಗೆಹರಿಸಲಾಗುವುದು ಎಂದು ವಿಜಯೇಂದ್ರ ಹೇಳಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಮುಂದಿನ 7 ದಿನಗಳಲ್ಲಿ ರಾಜ್ಯದಲ್ಲಿ ಬಿಸಿಲ ತಾಪ ಹೆಚ್ಚಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಆರೋಗ್ಯದ ದೃಷ್ಟಿಯಿಂದ ಈ ಅವಧಿಯಲ್ಲಿ ಜನರು ಕೆಲವು ಮುನ್ನೆಚ್ಚರಿಕೆ ಪಾಲಿಸುವಂತೆ ಸೂಚಿಸಲಾಗಿದ್ದು, ವಿಶೇಷವಾಗಿ 12 ಗಂಟೆವರೆಗೆ ಜನರು ಮನೆಯಿಂದ ಹೊರಬರಬಾರದು. ಬಾಯಾರಿಕೆ ಇಲ್ಲದಿದ್ದರೂ ಸಹ ಹೆಚ್ಚಾಗಿ ನೀರು ಕುಡಿಯಬೇಕು ಎಂದು ತಿಳಿಸಿದೆ.

ಸಡಿಲವಾದ, ಹತ್ತಿ ಬಟ್ಟೆ ಧರಿಸಬೇಕು, ಮನೆಯಿಂದ ಹೊರಗೆ ಹೋಗುವಾಗ ನೀರಿನ ಬಾಟಲ್, ಕೊಡೆ ತೆಗೆದುಕೊಂಡು ಹೋಗಬೇಕು. ಪ್ರೋಟಿನ್, ಬಿಸಿ ಮತ್ತು ಸ್ವಚ್ಛವಾದ ಆಹಾರ ಸೇವಿಸಬೇಕು. ಮನೆಯಲ್ಲಿರುವ ಜಾನುವಾರುಗಳಿಗೆ ನೆರಳು ಮತ್ತು ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಬೇಕು ಎಂದು ಇಲಾಖೆ ಸಲಹೆ ನೀಡಿದೆ.

*******

ತೀವ್ರ ಬರ ಹಿನ್ನೆಲೆ, ಯಾದಗಿರಿ ಜಿಲ್ಲೆಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಆಗದಂತೆ ಅವಶ್ಯಕ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಯಾದಗಿರಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯಲ್ಲಿ ಮಾತನಾಡಿದ ಅವರು, ಅವಶ್ಯಕತೆ ಇರುವ ಮತ್ತು ತೀವ್ರ ನೀರಿನ ಸಮಸ್ಯೆ ಎದುರಿಸಬಹುದಾದ ಗ್ರಾಮಗಳಲ್ಲಿ ಖಾಸಗಿ ಕೊಳವೆಬಾವಿ ಗುರುತಿಸಿ, ಮಾಲೀಕರೊಂದಿಗೆ ಎಸ್‌ಡಿಆರ್‌ಎಫ್ ನಿಯಮಾವಳಿ ಅನ್ವಯ ಒಡಂಬಡಿಕೆ ಮಾಡಿಕೊಳ್ಳುವಂತೆ ಸೂಚಿಸಿದರು.

*******

ಕುಡಿಯುವ ನೀರಿಗಾಗಿ ಭದ್ರಾ ಜಲಾಶಯದಿಂದ ನದಿ ಮೂಲಕ ನೀರು ಹರಿಸುತ್ತಿದ್ದು, ನದಿಪಾತ್ರದಲ್ಲಿ ಬರುವ ಅನಧಿಕೃತ ಪಂಪಸೆಟ್‌ಗಳನ್ನು ತೆರವುಗೊಳಿಸುವಂತೆ ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಆದೇಶ ಹೊರಡಿಸಿದ್ದಾರೆ.

ಭದ್ರಾ ಜಲಾಶಯದಿಂದ ಮಾರ್ಚ 29 ರಿಂದ ತುಂಗಭದ್ರಾ ನದಿಗೆ ನೀರು ಹರಿಸಲು ನಿರ್ಣಯಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ಜಲಾಶಯದಲ್ಲಿ ನೀರಿನ ಲಭ್ಯತೆ ಗಣನೀಯ ಕಡಿಮೆಯಿದ್ದು, ಲಭ್ಯವಿರುವ ನೀರನ್ನು ಸರಿಯಾಗಿ ಬಳಸಿಕೊಳ್ಳಲು ಯೋಜಿಸಲಾಗಿದೆ. ಹೀಗಾಗಿ ನದಿ ದಂಡೆಯಲ್ಲಿ ಅಳವಡಿಸಿರುವ ಅನಧಿಕೃತ ಪಂಪಸೆಟ್‌ಗಳಿಂದ ನೀರೆತ್ತುವುದನ್ನು ನಿಷೇಧಿಸಲಾಗಿದ್ದು, ಅವುಗಳಿಗೆ ಒದಗಿಸಲಾದ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಿ, ನದಿ ಪಾತ್ರದಲ್ಲಿ ನಿರ್ಮಿಸಿರುವ ಅನಧಿಕೃತ ಮಣ್ಣಿನ ಏರಿಗಳನ್ನು ತೆರವುಗೊಳಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದ್ದಾರೆ.

*******

ಬೇಸಿಗೆ ಸಂದರ್ಭದಲ್ಲಿ ಯಾವುದೇ ಕಾರಣಕ್ಕೂ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಎಲ್.ಚಂದ್ರಶೇಖರ ನಾಯಕ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲೆಯ ವಿವಿಧ ತಾಲೂಕುಗಳ ಅಧಿಕಾರಿಗಳೊಂದಿಗೆ ನಿನ್ನೆ ಸಭೆ ನಡೆಸಿದ ಅವರು, ಜೂನ್ ತಿಂಗಳವರೆಗೆ ಕುಡಿಯುವ ನೀರಿನ ಸಮಸ್ಯೆಯಾಗುವ ಸಾಧ್ಯತೆಗಳಿದ್ದು, ಜನರಿಗೆ ಕುಡಿಯುವ ನೀರನ್ನು ಒದಗಿಸಲು ಬೇಕಾದ ಯೋಜನೆಗಳನ್ನು ರೂಪಿಸಿ, ನೀರು ಪೂರೈಸಲು ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಹೆಚ್ಚಿನ ನೀರಿನ ಸಂಗ್ರಹ ಇರುವ ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಿ ಬೋರವೆಲ್ ಮಾಲೀಕರೊಂದಿಗೆ ಸಮನ್ವಯ ಸಾಧಿಸಿ ಸಮರೋಪಾದಿಯಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

*******

ಇತ್ತೀಚೆಗೆ ರಾಜ್ಯಸಭೆಗೆ ಆಯ್ಕೆಯಾದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಕಾಂಗ್ರೆಸ್‌ನ ಹಿರಿಯ ನಾಯಕಿ ಸೋನಿಯಾ ಗಾಂಧಿ ಸೇರಿದಂತೆ 14 ಸದಸ್ಯರು ನಿನ್ನೆ ಪ್ರಮಾಣವಚನ ಸ್ವೀಕರಿಸಿದರು. ಕರ್ನಾಟಕದಿಂದ ಆಯ್ಕೆಯಾದ ಕಾಂಗ್ರೆಸ್ ನಾಯಕರಾದ ಅಜಯ್ ಮಾಕೇನ್ ಮತ್ತು ಸೈಯದ್ ನಸೀರ್ ಹುಸೇನ್ ಅವರು ಸಹ ಪ್ರಮಾಣವಚನ ಸ್ವೀಕರಿಸಿದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಮೊದಲ ಹಂತದ, ರಾಜ್ಯದ 14 ಲೋಕಸಭಾ ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆ ಅವಧಿ ನಿನ್ನೆ ಮುಕ್ತಾಯ: ವಿವಿಧ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ.

ರಾಜ್ಯದಲ್ಲಿ ಮುಂದುವರಿದ ಮತದಾನ ಜಾಗೃತಿ: ಜಿಲ್ಲಾ ಸ್ವೀಪ್ ಸಮಿತಿಗಳಿಂದ ವೈವಿಧ್ಯಮಯ ಕಾರ್ಯಕ್ರಮಗಳು.

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ: ಅಗತ್ಯ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ.

ರಾಜ್ಯದಲ್ಲಿ ಹೆಚ್ಚುತ್ತಿರುವ ಬಿಸಿಲ ತಾಪ: ಮುನ್ನೆಚ್ಚರಿಕೆವಹಿಸಲು ಸಾರ್ವಜನಿಕರಿಗೆ ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ 7 ಗಂಟೆ 35 ನಿಮಿಷಕ್ಕೆ

******